**CC 1759/2023**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಗಳ ನ್ಯಾಯಾಲಯ, ಹೊಸಪೇಟೆ.**

**ಸಿಸಿ ನಂಬರ್ 1759/2023**

**ಸಿ ಡಬ್ಲೂ -2**
**ಪಿ ಡಬ್ಲೂ -1**

| | |
|---|---|
| **ಸಾಕ್ಷಿಯ ಹೆಸರು -** | **ವೆಂಕಟೇಶ** |
| **ತಂದೆಯ ಹೆಸರು -** | **ಮುದುಕಪ್ಪ** |
| **ವಯಸ್ಸು -** | 42 **ವರ್ಷಗಳು** |
| **ಉದ್ಯೋಗ -** | **ವ್ಯವಸಾಯ** |
| **ವಾಸಸ್ಥಳ -** | **ಹೊಸ ಮಲಪನಗುಡಿ** |

**ಸಾಕ್ಷಿಯನ್ನು ದಿನಾಂಕಃ 03-07-2025 ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಗೆ ನಾನು ಹೆಬ್ಬೆಟ್ಟಿನ ಗುರುತು ಹಾಕಿರುತ್ತೇನೆ. ಸಾಕ್ಷಿ ಕೃತ್ಯ ಸ್ಥಳ ಮತ್ತು ಜಪ್ತು ಪಂಚನಾಮೆಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ನಿಪಿಃ 1 ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ಈಗ್ಗೆ 2 ವರ್ಷಗಳ ಹಿಂದೆ ನಮ್ಮ ಊರಿನಲ್ಲಿ ಮಾಡಿದ್ದ. ನಿಪಿಃ 1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಆಗಿಲ್ಲ. ಮು ಮಾ ನೋಡಿದರೆ ಗುರುತಿಸಲು ಆಗುವುದಿಲ್ಲ. ಆರೋಪಿ ಯಾರೆಂದು ನನಗೆ ಗೊತ್ತಿಲ್ಲ. ಈಗ ನಾನು ನೋಡುತ್ತಿರುವ ಪೋಟೋದಲ್ಲಿನ ವ್ಯಕ್ತಿ ನಾನೇ. ಸಾಕ್ಷಿ ಪೋಟೋ ನೋಡಿ ಗುರುತಿಸಿದ್ದು ದಅನ್ನು ನಿಪಿಃ 2 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**CC 1759/2023**

**<u>ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ</u>**

ದಿಃ **15-04-2023** ರಂದು ಚಾಸಾ **-1** ರವರು ನನ್ನನ್ನು ಮತ್ತು ಚಾಸಾ **-3** ರವರನ್ನು ಗಾಳೆಮ್ಮನಗುಡಿ ಗ್ರಾಮದ ಪೀರಲ ದೇವರ ಮಸೀದಿ ಮುಂದೆ ಅಕ್ರಮವಾಗಿ ಮದ್ಯ ಮಾರಾಟ ಆಗುತ್ತಿದ್ದುದ್ದರಿಂದ ದಾಳಿ ಕಾರ್ಯಕ್ಕೆ ಪಂಚರಾಗಿ ಕರೆದುಕೊಂಡು ಹೋಗಿದ್ದರು ಅಂದರೆ ಸರಿಯಲ್ಲ. ನಾವು ಸದರಿ ಸ್ಥಳಕ್ಕೆ ಹೋದಾಗ ಆರೋಪಿ **90** ಎಂ ಎಲ್ ನ **58** ಹೈವರ್ಡ್ಸ್ ವಿಸ್ಕಿ ಟೆಟ್ರಾ ಪ್ಯಾಕ್ ಗಳನ್ನು ಮಾರಾಟ ಮಾಡುತ್ತಿದ್ದುದ್ದು ಕಂಡು ಬಂದಿತ್ತು ಅಂದರೆ ಸರಿಯಲ್ಲ. ಸದರಿ ಮದ್ಯದ ಟೆಟ್ರಾ ಪ್ಯಾಕ್ ಗಳನ್ನು ನನ್ನ ಮತ್ತು ಚಾಸಾ **-3** ರವರ ಸಮಕ್ಷಮ ಚಾಸಾ **-1** ರವರು ನಿಪಿಃ **1** ರಂತೆ ಪಂಚನಾಮೆ ಮಾಡಿ ಜಪ್ತು ಪಡಿಸಿಕೊಂಡಿದ್ದರು ಅಂದರೆ ಸರಿಯಲ್ಲ. ಆಗ ಸಮಯ ಮಧ್ಯಾಹ್ನ **02.00** ರಿಂದ **03.00** ಗಂಟೆ ಆಗಿತ್ತು ಅಂದರೆ ಸರಿಯಲ್ಲ. ನ್ಯಾಯಾಲಯದ ಮುಂದಿರುವ ಮು ಮಾ ನಮ್ಮ ಸಮಕೆಮ ಜಪ್ತಾದ ಮದ್ಯದ ಟೆಟ್ರಾ ಪ್ಯಾಕ್ ಗಳು ಅಂದರೆ ಸರಿಯಲ್ಲ. ನನ್ನ ಸಮಕ್ಷಮ ನಿಪಿಃ **1** ರಂತೆ ಪಂಚನಾಮೆ ಕ್ರಮ ಜರುಗಿಸಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

<u>**ಪಾಟೀ ಸವಾಲು ಆರೋಪಿ ಪರ ಶ್ರೀ ಎನ್ ಎಸ್ ಹೆಚ್.,ವಕೀಲರಿಂದಃ** ಇಲ್ಲಾ.</u>

ಮರುವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆ.ಎಂ.ಎಫ್.ಸಿ., ಹೊಸಪೇಟೆ.